**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಇಂಡಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ನಅಇ 247 ಬೆಮಪ್ರಾ 2016, ದಿನಾಂಕ 22.08.2016.
2. ಸದಸ್ಯ ಕಾರ್ಯದರ್ಶಿ ಮತ್ತು ಮುಖ್ಯಾಧಿಕಾರಿಗಳು, ಇಂಡಿ ಪುರಸಭಾ ಯೋಜನಾ ಪ್ರಾಧಿಕಾರ, ಇಂಡಿ ರವರ ಪತ್ರ ಸಂಖ್ಯೆ: ನಗ್ರಾಯೋ(5)ಇಂಡಿ/ಮಯೋ/ ಅಂತಿಮ/ 2017-18/535 ದಿನಾಂಕ 23.03.2018 ಮತ್ತು 22.06.2018.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ: DTCP-1-MPF-2017-18 ದಿನಾಂಕ 27.06.2018 ರಲ್ಲಿ ನೀಡಿರುವ ಅಭಿಪ್ರಾಯ

ATP-3

******

4263 15/10/18

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಇಂಡಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪ-1) ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಇಂಡಿ ಪುರಸಭಾ ಯೋಜನಾ ಪ್ರಾಧಿಕಾರವು ಇಂಡಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ.13(1) ರಂತೆ ಅಗತ್ಯ ಕ್ರಮ ಜರುಗಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ.13(3)ರಡಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರ ಮುಖಾಂತರ ಸರ್ಕಾರದ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿದೆ.

ಮೇಲೆ ಓದಲಾದ (3)ರ ಏಕ ಕಡತದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಇಂಡಿ ಪಟ್ಟಣದ ಜನಸಂಖ್ಯೆಯು 2031ನೇ ಇಸವಿಗೆ 55,500 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆಯನ್ನು ರೂಪಿಸಲಾಗಿದ್ದು, ಇಂಡಿ ಪಟ್ಟಣದ ಜನಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಹಾ ಯೋಜನೆಯ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ (9) ರಿಂದ (12) ರವರೆಗೆ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ನಗರದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 1468.83 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 919.38 ಹೆಕ್ಟೇರ್ (ಶೇ.62.59), ವಾಣಿಜ್ಯಕ್ಕಾಗಿ 86.93 ಹೆಕ್ಟೇರ್(ಶೇ.5.92), ಕೈಗಾರಿಕೆಗಾಗಿ 64.05 ಹೆಕ್ಟೇರ್ (ಶೇ.4.36), ಸಾರ್ವಜನಿಕ/ಅರೆ ಸಾರ್ವಜನಿಕ

ಉಪಯೋಗಕ್ಕೆ 81.47 ಹೆಕ್ಟೇರ್(ಶೇ.5.55), ಉದ್ಯಾನವನ ಮತ್ತು ಬಯಲು ಜಾಗಗಳಿಗೆ 89.73(ಶೇ.6.11), ನಾಗರೀಕ ಸೌಲಭ್ಯಕ್ಕಾಗಿ 0.84 ಹೆಕ್ಟೇರ್ (ಶೇ0.06) ಹಾಗೂ ಸಾರಿಕೆ ಮತ್ತು ಸಂಪರ್ಕ ವಲಯಕ್ಕೆ 226.43 ಹೆಕ್ಟೇರ್ (ಶೇ.15.41) ಪ್ರದೇಶವನ್ನು ನಿಗದಿಪಡಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ನಅಇ 122 ಬೆಮಪ್ರಾ 2018, ಬೆಂಗಳೂರು, ದಿನಾಂಕ 06.10.2018**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಇಂಡಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ.13(3) ರನ್ವಯ ಅಂತಿಮ ಅನುಮೋದನೆ ನೀಡಿದೆ.

ಮಹಾಯೋಜನೆಗೆ, ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

**ಇವರಿಗೆ:**

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರು 200 ಪ್ರತಿಗಳನ್ನು ವಿಶೇಷ ರಾಜ್ಯ ಪತ್ರದಲ್ಲಿ ಮುದ್ರಿಸಿ, 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಹಾಗೂ 100 ಪ್ರತಿಗಳನ್ನು ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಗೆ ಕಳುಹಿಸುವಂತೆ ಕೋರಲಾಗಿದೆ.

<u>ಪ್ರತಿಯನ್ನು:</u>

1) ಜಿಲ್ಲಾಧಿಕಾರಿ, ವಿಜಯಪುರ ಜಿಲ್ಲೆ, ವಿಜಯಪುರ.
2) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು
3) ಸದಸ್ಯ ಕಾರ್ಯದರ್ಶಿ ಮತ್ತು ಮುಖ್ಯಾಧಿಕಾರಿ, ಇಂಡಿ ಪುರಸಭೆ ಯೋಜನಾ ಪ್ರಾಧಿಕಾರ, ಇಂಡಿ.
4) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ವಿಜಯಪುರ.
5) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.